ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಶಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 18/3/21

## ಕಲಾಪಕ್ಕೆ ನಾಲ್ಕು ದಿನ ರಜೆ

ವಿಧಾನಸಭೆ: ಮಹಾಶಿವರಾತ್ರಿಯ ಹಿನ್ನೆಲೆಯಲ್ಲಿ ಮಾರ್ಚ್ 11ರಿಂದ ಮಾರ್ಚ್ 15ರವರೆಗೆ ಕಲಾಪ ಮುಂದೂಡಲು ಕಲಾಪ ಸಲಹಾ ಸಮಿತಿ ನಿರ್ಧರಿಸಿದೆ. ಸಂಪ್ರದಾಯದಂತೆ ಶುಕ್ರವಾರ ಅರ್ಧದಿನ ಮಾತ್ರ ಕಲಾಪ ನಡೆಸಲಾಗುತ್ತದೆ. ಶನಿವಾರ ಮತ್ತು ರವಿವಾರ ಕಲಾಪಕ್ಕೆ ರಜೆ ಇರುತ್ತದೆ. ಈ ಹಿನ್ನೆಲೆಯಲ್ಲಿ ನಡುವಿನ ಶುಕ್ರವಾರ ಅರ್ಧದಿನ ಕಲಾಪ ಮಾಡುವುದು ಸೂಕ್ತವಲ್ಲ ಎನ್ನುವ ನಿರ್ಣಯಕ್ಕೆ ಕಲಾಪ ಸಲಹಾ ಸಮಿತಿ ನಿರ್ಧರಿಸಿತು. ಮಂಗಳವಾರ ಬೆಳಿಗ್ಗೆ ನಡೆದ ಕಲಾಪ ಸಲಹಾ ಸಮಿತಿ ಸಭೆಯಲ್ಲಿ ಈ ನಿರ್ಣಯಕ್ಕೆ ಬರಲಾಗಿದೆ ಎಂದು ಸ್ಪೀಕರ್ ವಿಶ್ವೇಶ್ವರ ಹೆಗಡೆ ಪ್ರಕಟಿಸಿದರು. ಮಾರ್ಚ್ 15ರಿಂದ 19ನೇ ತಾರೀಕಿನವರೆಗೆ ಬಜೆಟ್ ಮೇಲೆ ಚರ್ಚೆ ನಡೆಯಲಿದೆ. ಮಾರ್ಚ್ 22ರಿಂದ 25ನೇ ತಾರೀಕಿನವರೆಗೆ ಇಲಾಖಾವಾರು ಅನುದಾನದ ಮೇಲೆ ಚರ್ಚೆ ನಡೆಯುತ್ತದೆ. 26ರಂದು ಮುಖ್ಯಮಂತ್ರಿಗಳು ಬಜೆಟ್ ಮೇಲಿನ ಚರ್ಚೆಗೆ ಉತ್ತರ ನೀಡಲಿದ್ದಾರೆ.